ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ
**Bangalore Development Authority**

ಸಂಖ್ಯೆ: ಬೆಂಅಪ್ರಾ/ನಯೋಸ/DLP-11/14-15/ 426 /2016-17.
No.

ದಿನಾಂಕ: 13-05-16
Date:

## ಕಾರ್ಯಾದೇಶ

ವಿಷಯ:- ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಪುಟ್ಟೇನಹಳ್ಳಿ ಗ್ರಾಮದ ಸರ್ವೆ ನಂ.32/1 ರಲ್ಲಿ 4 ಎಕರೆ 21 ಗುಂಟೆ (0-09 ಗುಂಟೆ ಖರಾಬು ಹೊರತುಪಡಿಸಿ), ಸರ್ವೆ.ನಂ.32/3 ರಲ್ಲಿ 0-27 ಗುಂಟೆ, ಸರ್ವೆ.ನಂ.32/4 ರಲ್ಲಿ 0-27 ಗುಂಟೆ (0-05 ಗುಂಟೆ ಖರಾಬು ಹೊರತುಪಡಿಸಿ) ಒಟ್ಟಾರೆ 5 ಎಕರೆ 35 ಗುಂಟೆ ( ಒಟ್ಟಾರೆ 0-14 ಗುಂಟೆ ಖರಾಬು ಹೊರತುಪಡಿಸಿ) ವಿಸ್ತೀರ್ಣಕ್ಕೆ ವಸತಿ ಅಭಿವೃದ್ಧಿ ಯೋಜನೆ ನಕ್ಷೆ ಅನುಮೋದನೆಗಾಗಿ ಜಮೀನಿನ ಮಾಲೀಕರಾದ ಶ್ರೀ.ಶಿವಾರ್ಥಿ, ನಿರ್ಗುಣಾರ್ಥಿ,ಅಶೋಕ್ ಎಂ.ಗುರುದಾಸ್,ಮೈತ್ರಿ, ಎಂ.ನಾರಾಯಣದಾಸ್, ಎಂ,ಎನ್.ಪ್ರಿಯದತ್ತ ಮತ್ತು ಇತರರ ಪರವಾಗಿ GPA ದಾರರಾದ M/s Adarsh Developers ನ ಮ್ಯಾನೇಜಿಂಗ್ ಪಾರ್ಟ್ ನರ್ ಆದ ಶ್ರೀ.ಬಿ.ಎಂ.ಜಯಶಂಕರ್ ರವರು ಕೋರಿರುವ ಬಗ್ಗೆ.

ಉಲ್ಲೇಖ

1. ಅರ್ಜಿದಾರರ ಮನವಿ ದಿನಾಂಕ 19.06.2014.
2. ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ಠರಾವು ಸಂಖ್ಯೆ 20/2015, ದಿನಾಂಕ 28.01.2015.
3. ಈ ಕಛೇರಿಯ ಪತ್ರ ಸಂಖ್ಯೆ ಬೆಂಅಪ್ರಾ/ನಯೋಸ/DLP-11/4393/2014-15, ದಿನಾಂಕ 25.02.2015 ರಂದು ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ವಿವಿಧ ಶುಲ್ಕಗಳಾದ ₹. 16,72,000/- ಅನ್ನು ಪ್ರಾಧಿಕಾರಕ್ಕೆ ಪಾವತಿಸುವಂತೆ ತಿಳಿಸಿರುವುದು.
4. ಅರ್ಜಿದಾರರು ದಿನಾಂಕ 27.02.2015 ರಂದು ಕೆನರಾ ಬ್ಯಾಂಕ್ ಚಲನ್ ನಂ. 38711 ರ ಮೂಲಕ ₹. 16,72,000/- ಗಳನ್ನು ಪ್ರಾಧಿಕಾರಕ್ಕೆ ಸಂದಾಯ ಮಾಡಿರುತ್ತಾರೆ. ಸದರಿ ಮೊತ್ತವು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಸಂದಾಯವಾಗಿರುವ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆರ್ಥಿಕ ವಿಭಾಗದ ಲೆಕ್ಕಾಧಿಕಾರಿಗಳು ದಿನಾಂಕ 13.03.2015 ರಂದು ದೃಢೀಕರಿಸಿರುತ್ತಾರೆ.
5. ಈ ಕಛೇರಿಯ ಅನೌಪಚಾರಿಕ ಟಿಪ್ಪಣಿ ಸಂಖ್ಯೆ ಬೆಂಅಪ್ರಾ/ನಯೋಸ/DLP-11/4765/2014-15, ದಿನಾಂಕ 23.03.2015 ರಂದು ಕರಡು ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಂತೆ ಉದ್ಯಾನವನ / ಬಯಲು ಜಾಗ ಮತ್ತು ರಸ್ತೆ ಪ್ರದೇಶಗಳನ್ನು ನೋಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಉಚಿತವಾಗಿ ಹಸ್ತಾಂತರಿಸಿಕೊಳ್ಳಲು ಕಾರ್ಯಪಾಲಕ ಅಭಿಯಂತರರು [ದಕ್ಷಿಣ ವಿಭಾಗ] ವಿಭಾಗದವರಿಗೆ ತಿಳಿಸಿರುವುದು.
6. ಕಾರ್ಯಪಾಲಕ ಅಭಿಯಂತರರು [ದಕ್ಷಿಣ ವಿಭಾಗ], ಬೆಂಅಪ್ರಾ ಇವರು ದಿನಾಂಕ 03.02.2016 ರಂದು ನೋಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಉದ್ಯಾನವನ / ಬಯಲು ಜಾಗ ಮತ್ತು ರಸ್ತೆ ಪ್ರದೇಶಗಳನ್ನು ಪ್ರಾದಿಕಾರಕ್ಕೆ ಹಸ್ತಾಂತರಿಸಿ ಕೊಂಡಿರುವುದು.

7. ಕಾವೇರಿ ನೀರಿನ ಕರ, ವರ್ತುಲ ರಸ್ತೆ ಮೇಲುಕರ ಹಾಗೂ **MRTS** ಕರಗಳನ್ನು ಪಾವತಿಸುವ ಸಂಬಂಧ ಸರ್ಕಾರದ ಅಂತಿಮ ತೀರ್ಮಾನಕ್ಕೆ ಬದ್ಧರಿರುವುದಾಗಿ ಛಾಪಾ ಕಾಗದದಲ್ಲಿ ನೋಟರಿಯವರಿಂದ ದೃಢೀಕರಿಸಿದ ಪ್ರಮಾಣ ಪತ್ರವನ್ನು ದಿನಾಂಕ 08.02.2016 ರಂದು ನೀಡಿರುತ್ತಾರೆ.

ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಪುಟ್ಟೇನಹಳ್ಳಿ ಗ್ರಾಮದ ಸರ್ವೆ ನಂ.32/1 ರಲ್ಲಿ 4 ಎಕರೆ 21 ಗುಂಟೆ (0-09 ಗುಂಟೆ ಖರಾಬು ಹೊರತುಪಡಿಸಿ), ಸರ್ವೆ.ನಂ.32/3 ರಲ್ಲಿ 0-27 ಗುಂಟೆ, ಸರ್ವೆ.ನಂ.32/4 ರಲ್ಲಿ 0-27 ಗುಂಟೆ (0-05 ಗುಂಟೆ ಖರಾಬು ಹೊರತುಪಡಿಸಿ) ಒಟ್ಟಾರೆ 5 ಎಕರೆ 35 ಗುಂಟೆ ( ಒಟ್ಟಾರೆ 0-14 ಗುಂಟೆ ಖರಾಬು ಹೊರತುಪಡಿಸಿ) ವಿಸ್ತೀರ್ಣಕ್ಕೆ ವಸತಿ ಅಭಿವೃದ್ಧಿ ಯೋಜನಾ ನಕ್ಷೆಯನ್ನು ಅನುಮೋದಿಸುವಂತೆ ಅರ್ಜಿದಾರರಾದ ಮಾಲೀಕರಾದ ಶ್ರೀ.ಶಿವಾರ್ಥಿ, ನಿರ್ಗುಣಾರ್ಥಿ,ಅಶೋಕ್ ಎಂ.ಗುರುದಾಸ್,ಮೈತ್ರಿ, ಎಂ.ನಾರಾಯಣದಾಸ್, ಎಂ.ಎನ್.ಪ್ರಿಯದತ್ತ ಮತ್ತು ಇತರರ ಪರವಾಗಿ GPA ದಾರರಾದ M/s Adarsh Developers ನ ಮ್ಯಾನೇಜಿಂಗ್ ಪಾರ್ಟ್ ನರ್ ಆದ ಶ್ರೀ.ಬಿ.ಎಂ.ಜಯಶಂಕರ್ ರವರು ಉಲ್ಲೇಖ (1) ರ ಮನವಿಯಲ್ಲಿ ಕೋರಲಾಗಿತ್ತು.

ಅರ್ಜಿದಾರರ ಮನವಿಯ ಮೇರೆಗೆ ಪ್ರಸ್ತಾವನೆಯನ್ನು ಉಲ್ಲೇಖ (2) ರ ಪ್ರಾಧಿಕಾರದ ಸಮಿತಿ ಸಭೆಯ ಠರಾವು ಸಂಖ್ಯೆ 20/2015, ದಿನಾಂಕ 28.01.2015 ರಲ್ಲಿ ಮಂಡಿಸಿ, ಚರ್ಚಿಸಲಾಗಿರುತ್ತದೆ. ಚರ್ಚೆಯ ನಂತರ ರಸ್ತೆಗಾಗಿ ಸೂಚಿಸಿರುವ ಸರ್ವೆ ನಂ. ಜಾಗವನ್ನು ಪುಕ್ಕಟೆಯಾಗಿ ಪ್ರಾಧಿಕಾರಕ್ಕೆ ಪರಿತ್ಯಜನಾ ಪತ್ರದ ಮೂಲಕ ಹಸ್ತಾಂತರಿಸುವ ಷರತ್ತಿಗೊಳಪಡಿಸಿ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಪುಟ್ಟೇನಹಳ್ಳಿ ಗ್ರಾಮದ ಸರ್ವೆ ನಂ.32/1 ರಲ್ಲಿ 4 ಎಕರೆ 21 ಗುಂಟೆ (0-09 ಗುಂಟೆ ಖರಾಬು ಹೊರತುಪಡಿಸಿ), ಸರ್ವೆ.ನಂ.32/3 ರಲ್ಲಿ 0-27 ಗುಂಟೆ, ಸರ್ವೆ.ನಂ.32/4 ರಲ್ಲಿ 0-27 ಗುಂಟೆ (0-05 ಗುಂಟೆ ಖರಾಬು ಹೊರತುಪಡಿಸಿ) ಒಟ್ಟಾರೆ 5 ಎಕರೆ 35 ಗುಂಟೆ ( ಒಟ್ಟಾರೆ 0-14 ಗುಂಟೆ ಖರಾಬು ಹೊರತುಪಡಿಸಿ) ವಿಸ್ತೀರ್ಣ ಪ್ರದೇಶಕ್ಕೆ ಲಗತ್ತಾಗಿರುವ ಉಪಗಮನ ರಸ್ತೆಯನ್ನು ಅರ್ಜಿದಾರರ ಪ್ರದೇಶದ ಎರಡೂ ಬದಿಗಳಲ್ಲಿ ಕನಿಷ್ಠ 100 ಮೀ. ಉದ್ದಕ್ಕೆ ಅರ್ಜಿದಾರರ ಸ್ವಂತ ವೆಚ್ಚದಲ್ಲಿ ಅಭಿವೃದ್ಧಿ ಪಡಿಸುವ ಷರತ್ತಿಗೊಳಪಡಿಸಿ ಹಾಗೂ ಕೆಲವು ಸಾಮಾನ್ಯ ಷರತ್ತುಗಳಿಗೊಳಪಡಿಸಿ ವಸತಿ ಅಭಿವೃದ್ಧಿ ಯೋಜನೆ ನಕ್ಷೆಯನ್ನು ಅನುಮೋದಿಸಲು ತೀರ್ಮಾನಿಸಲಾಯಿತು.

ಪ್ರಾಧಿಕಾರದ ನಗರ ಯೋಜನಾ ಸಮಿತಿ ಸಭೆಯ ತೀರ್ಮಾನದಂತೆ ವಸತಿ ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಅರ್ಜಿದಾರರಿಗೆ ಉಲ್ಲೇಖ (3) ರ ಪತ್ರದಂತೆ ವಿವಿಧ ಶುಲ್ಕಗಳ ಬಾಬ್ತು ₹. 16,72,000/- [₹. ಹದಿನಾರು ಲಕ್ಷದ ಎಪ್ಪತ್ತೆರಡು ಸಾವಿರ ಮಾತ್ರ] ಗಳನ್ನು ಪ್ರಾಧಿಕಾರಕ್ಕೆ ಪಾವತಿಸುವಂತೆ ತಿಳಿಸಲಾಗಿತ್ತು.

ಉಲ್ಲೇಖ [4] ರಂತೆ ಅರ್ಜಿದಾರರು ದಿನಾಂಕ 27.02.2015 ರಂದು ₹. 16,72,000/- [₹. ಹದಿನಾರು ಲಕ್ಷದ ಎಪ್ಪತ್ತೆರಡು ಸಾವಿರ ಮಾತ್ರ] ಗಳನ್ನು ಕೆನರಾ ಬ್ಯಾಂಕ್ ನ ಚಲನ್ ನಂ. 38711 ರ ಮೂಲಕ ಪಾವತಿಸಿರುತ್ತಾರೆ. ಸದರಿ ಮೊತ್ತವು ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಸಂದಾಯವಾಗಿರುವ ಬಗ್ಗೆ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆರ್ಥಿಕ ವಿಭಾಗದ ಲೆಕ್ಕಾಧಿಕಾರಿಗಳು ದಿನಾಂಕ 13.03.2015 ರಂದು ದೃಢೀಕರಿಸಿರುತ್ತಾರೆ.

ಉಲ್ಲೇಖ [5] ರಂತೆ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಕಾಯ್ದಿರಿಸಿರುವ ಉದ್ಯಾನವನ / ಬಯಲು ಜಾಗ ಮತ್ತು ರಸ್ತೆ ಪ್ರದೇಶಗಳನ್ನು ನೋಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಉಚಿತವಾಗಿ ಹಸ್ತಾಂತರಿಸಿಕೊಳ್ಳುವಂತೆ ಕಾರ್ಯಪಾಲಕ ಅಭಿಯಂತರರ [ದಕ್ಷಿಣ] ವಿಭಾಗಕ್ಕೆ ತಿಳಿಸಲಾಗಿತ್ತು.

ಉಲ್ಲೇಖ [6] ರಂತೆ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಕಾಯ್ದಿರಿಸಿರುವ ಉದ್ಯಾನವನ / ಬಯಲು ಜಾಗ ಮತ್ತು ರಸ್ತೆ ಪ್ರದೇಶವನ್ನು ನೋಂದಾಯಿತ ಪರಿತ್ಯಾಜನಾ ಪತ್ರದ ಮೂಲಕ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರಕ್ಕೆ ಹಸ್ತಾಂತರಿಸಿ ಕೊಂಡಿರುವುದಾಗಿ ಪ್ರಾಧಿಕಾರದ ಕಾರ್ಯಪಾಲಕ ಅಭಿಯಂತರರು, ದಕ್ಷಿಣ ವಿಭಾಗದವರು ವರದಿ ಮಾಡಿರುತ್ತಾರೆ.

ಉಲ್ಲೇಖ (7) ರಂತೆ ಸರ್ಕಾರದ ತೀರ್ಮಾನಕ್ಕೆ ಅನುಗುಣವಾಗಿ ಕಾವೇರಿ ನೀರಿನ ಕರ, ವರ್ತುಲ ರಸ್ತೆ, ಮೇಲುಕರ ಮತ್ತು ಎಂ.ಆರ್.ಟಿ.ಎಸ್ ಕರಗಳನ್ನು ಹಾಗೂ ಮೆಟ್ರೋಸೆಸ್ ಪಾವತಿಸುವ ಸಂಬಂಧ ನೋಟರೈಸ್ಡ್ ಪ್ರಮಾಣ ಪತ್ರವನ್ನು ದಿನಾಂಕ 08.02.2016 ರಂದು ಅರ್ಜಿದಾರರು ಸಲ್ಲಿಸಿರುತ್ತಾರೆ.

ಮೇಲ್ಕಂಡ ಅಂಶಗಳ ಹಿನ್ನಲೆಯಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು, ಉತ್ತರಹಳ್ಳಿ ಹೋಬಳಿ, ಪುಟ್ಟೇನಹಳ್ಳಿ ಗ್ರಾಮದ ಸರ್ವೆ ನಂ.32/1 ರಲ್ಲಿ 4 ಎಕರೆ 21 ಗುಂಟೆ (0-09 ಗುಂಟೆ ಖರಾಬು ಹೊರತುಪಡಿಸಿ), ಸರ್ವೆ.ನಂ.32/3 ರಲ್ಲಿ 0-27 ಗುಂಟೆ, ಸರ್ವೆ.ನಂ.32/4 ರಲ್ಲಿ 0-27 ಗುಂಟೆ (0-05 ಗುಂಟೆ ಖರಾಬು ಹೊರತುಪಡಿಸಿ) ಒಟ್ಟಾರೆ 5 ಎಕರೆ 35 ಗುಂಟೆ ( ಒಟ್ಟಾರೆ 0-14 ಗುಂಟೆ ಖರಾಬು ಹೊರತುಪಡಿಸಿ) ವಿಸ್ತೀರ್ಣ ಪ್ರದೇಶಕ್ಕೆ ವಸತಿ ಅಭಿವೃದ್ಧಿ ಯೋಜನಾ ನಕ್ಷೆಗೆ ಈ ಕೆಳಕಂಡ ಷರತ್ತುಗಳನ್ನು ವಿಧಿಸಿ ಅನುಮೋದನೆ ನೀಡಲಾಗಿದೆ.

| | |
|---|---|
| 1. | ವಿವರವಾದ ಕಟ್ಟಡ ನಕ್ಷೆಗಳನ್ನು ಸಕ್ಷಮ ಪ್ರಾಧಿಕಾರದಿಂದ ಅನುಮೋದಿಸಿಕೊಳ್ಳುವುದು. |
| 2 | ಸದರಿ ಯೋಜನೆಯಲ್ಲಿ ಮಳೆ ನೀರು ಕೂಯ್ಲು ವ್ಯವಸ್ತೆಯನ್ನು ಕಲ್ಪಿಸುವುದು. ಕುಡಿಯುವ ನೀರು ಹಾಗೂ ಒಳಚರಂಡಿ ವ್ಯವಸ್ಥೆಯನ್ನು ಕಲ್ಪಿಸುವುದು. |
| 3 | ಪ್ರಾಧಿಕಾರವು ಅನುಮೋದಿಸಿರುವ ಅಭಿವೃದ್ಧಿ ಯೋಜನಾ ನಕ್ಷೆಯಂತೆಯೇ ಅಭಿವೃದ್ಧಿ ಕಾರ್ಯಗಳನ್ನು ಕಾರ್ಯಗತ ಮಾಡುವುದು. ಪ್ರಾಧಿಕಾರದ ಪೂರ್ವಾನುಮತಿ ಇಲ್ಲದೆ ಯಾವುದೇ ಬದಲಾವಣೆ ಮಾಡುವಂತಿಲ್ಲ. |
| 4 | ಅಭಿವೃದ್ಧಿದಾರರು ಉದ್ಯಾನವನಕ್ಕಾಗಿ ಕಾಯ್ದಿರಿಸುವ ಪ್ರದೇಶದಲ್ಲಿ ವಿವಿದ ಜಾತಿಯ ಮರಗಿಡಗಳನ್ನು ಬೆಳಸಿ ಅಭಿವೃದ್ಧಿ ಪಡಿಸುವುದು. ಹಾಗೂ ಸದರಿ ಉದ್ದೇಶಕ್ಕಾಗಿ ಕಾಯ್ದಿರಿಸಿ ಉಪಯೋಗಿಸತಕ್ಕದ್ದು ಬೇರೆ ಯಾವುದೇ ಉದ್ದೇಶಗಳಿಗೆ ಬದಲಾಯಿಸಬಾರದು. |
| 5 | ಸದರಿ ಪ್ರದೇಶದ ಒಳಗೆ ಹೋಗಲು ಮತ್ತು ಹೊರಗೆ ಬರಲು ಸಂಚಾರ ವ್ಯವಸ್ತೆಯಲ್ಲಿ ಅಡಚಣೆ ಉಂಟಾಗದಂತೆ ವ್ಯವಸ್ಥೆ ಕಲ್ಪಿಸುವುದು. ವಾಹನ ತಪಾಸಣೆಗೆ ಮತ್ತು ಭದ್ರತಾ ವ್ಯವಸ್ತೆಯನ್ನು ಅಳವಡಿಸಿದಲ್ಲಿ ಸ್ವತ್ತಿನ ಒಳಭಾಗದಲ್ಲಿ ನಿರ್ವಹಿಸುವುದು. |
| 6 | ವಿವರವಾದ ಕಟ್ಟಡ ನಕ್ಷೆಗಳನ್ನು ಅನುಮೋದಿಸುವ ಸಕ್ಷಮ ಪ್ರಾಧಿಕಾರವು Structural Stability ಬಗ್ಗೆ ಬಗ್ಗೆ ಹಾಗೂ ವಿವಿಧ ಇಲಾಖೆಗಳು ನೀಡುವ NOC ಗಳಲ್ಲಿನ ಷರತ್ತುಗಳೊಂದಿಗೆ ಪರಿಶೀಲಿಸಿಕೊಳ್ಳತಕ್ಕದ್ದು. |

| | |
|---|---|
| 7 | ಕಟ್ಟಡ ಕಾಮಗಾರಿ ಪ್ರಾರಂಭವಾದ ನಂತರ ಕಟ್ಟಡ ಸುರಕ್ಷತೆಯ ಬಗ್ಗೆ ಸಂಬಂಧಿಸಿದ ಸಕ್ಷಮ ಪ್ರಾಧಿಕಾರವು ಪರಿಶೀಲಿಸಿಕೊಳ್ಳತಕ್ಕದ್ದು. |
| 8 | ಅರ್ಜಿದಾರರು ಉದ್ದೇಶಿಸಿರುವ ಜಮೀನಿನಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಅನ್ಯಖಾಸಗಿ ಜಮೀನುಗಳೇನಾದರೂ ಸೇರಿಕೊಂಡಿರುವುದು ತಿಳಿದುಬಂದಲ್ಲಿ ಅಂತಹ ಸಂದರ್ಭದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಆಯುಕ್ತರು ಅನುಮೋದಿತ ಅಭಿವೃದ್ಧಿನಕ್ಷೆಯನ್ನು ಮಾರ್ಪಾಡು ಮಾಡಲು ಅಥವಾ ಹಿಂತೆಗೆದುಕೊಳ್ಳಲು ಅಧಿಕಾರವುಳ್ಳವರಾಗಿರುತ್ತಾರೆ. |
| 9 | ದಿನಾಂಕ: 16/1/2010 ರಂದು ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ನಗರಾಭಿವೃದ್ಧಿ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ಜರುಗಿದ ಸಭೆಯ ನಡವಳಿಯಲ್ಲಿ ತೆಗೆದುಕೊಂಡ ನಿರ್ಣಯದಂತೆ ಹಾಗೂ ದಿನಾಂಕ: 07/01/2011 ರಂದು ಜರುಗಿದ ಸಮಿತಿ ಸಭೆಯ ವಿಷಯ ಸಂಖ್ಯೆ:09/2011ರ ತೀರ್ಮಾನದಂತೆ ಅಭಿವೃದ್ಧಿನಕ್ಷೆಯಲ್ಲಿ Arrangement of Blocks ಗಳನ್ನು ವಲಯನಿಯಮಾವಳಿಗಳಂತೆ ಪರಿಶೀಲಿಸಲಾಗಿದ್ದು, ಕಟ್ಟಡನಕ್ಷೆಗೆ ಸಂಬಂಧಿಸಿದ ಇತರೆ ವಿವರಗಳನ್ನು ಪರಿಶೀಲಿಸುವುದಿಲ್ಲ. ಇದನ್ನು ಕಟ್ಟಡನಕ್ಷೆ ಅನುಮೋದಿಸುವ ಸಕ್ಷಮ ಪ್ರಾಧಿಕಾರವು ವಿವಿಧ ಇಲಾಖೆಗಳಿಂದ NOC ಗಳನ್ನು ಮತ್ತು ಇನ್ನಿತರೇ ವಿವರಗಳನ್ನು ಅರ್ಜಿದಾರರಿಂದ ಪಡೆದು ನಿಯಮಾನುಸಾರ ಪರಿಶೀಲಿಸಿಕೊಳ್ಳತಕ್ಕದ್ದು. |
| 10 | ಅಭಿವೃದ್ಧಿ ಯೋಜನಾ ನಕ್ಷೆ ಅನುಮೋದನೆ ಸಂಬಂಧ ಜಮೀನಿನ ಮಾಲೀಕತ್ವದ ಬಗ್ಗೆ ಅರ್ಜಿದಾರರು ತಪ್ಪು ಮಾಹಿತಿ ದಾಖಲಾತಿ ನೀಡಿದ್ದು ನ್ಯಾಯಾಲಯದಲ್ಲಿ ತಕರಾರು ಉದ್ಭವವಾದಲ್ಲಿ ಅಭಿವೃದ್ಧಿ ಯೋಜನಾ ನಕ್ಷೆಯ ಅನುಮೋದನೆಯು ತನ್ನಿಂತಾನೇ ರದ್ದಾಗುತ್ತದೆ. |
| 11 | ಅಭಿವೃದ್ಧಿ ಯೋಜನೆಯಲ್ಲಿ ಘನತ್ಯಾಜ್ಯಗಳನ್ನು, ಹಸಿ ತ್ಯಾಜ್ಯ, ಒಣತ್ಯಾಜ್ಯ, ಪ್ಲಾಸ್ಟಿಕ್ ಮತ್ತು ಇತ್ಯಾದಿಯಾಗಿ ವಿಂಗಡಿಸಿ, Compost ಮಾಡಲು ಸೂಕ್ತ ಸ್ಥಳವನ್ನು ಕಾಯ್ದಿರಿಸತಕ್ಕದ್ದು. |
| 12 | ಸ್ವಾಭಾವಿಕವಾಗಿ ಇಳಿಮಟ್ಟದ ಕಡೆ ಹೋಗುವ ಮಳೆ ನೀರನ್ನು ಡ್ರೈನ್ ಮುಖಾಂತರ ವ್ಯಾಲಿಗೆ ತಂದು ಸೇರಿಸುವುದು ಹಾಗೂ ನೀರು ಸರಾಗವಾಗಿ ಹರಿಯಲು ಸೂಕ್ತ ವ್ಯವಸ್ತೆ ಮಾಡುವುದು. |
| 13 | ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಅರ್ಜಿದಾರರು ಕಡ್ಡಾಯವಾಗಿ ಮಳೆನೀರು ಕೋಯ್ಲಿಗೆ ಸಂಬಂಧೀಸಿದಂತೆ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ಉದ್ದೇಶಿತ ಒಟ್ಟು ಕ್ಷೇತ್ರದಲ್ಲಿ ಯಾವುದೇ ರೀತಿಯ ಮಳೆ ನೀರು ವ್ಯರ್ಥವಾಗಿ ಹೊರಗೆ ಹೋಗದಂತೆ ಉದ್ದೇಶಿತ ಜಮೀನಿನಲ್ಲಿಯೇ ಭೂಮಿಯ ಒಳಗಡೆ ಇಂಗುವಂತೆ ಮಾಡಲು ವಿನ್ಯಾಸವನ್ನು ಸಿದ್ಧಪಡಿಸಿ ಪೂರ್ಣ ವಿವರಗಳನ್ನು ನಕ್ಷೆಯಲ್ಲಿ ಗುರುತಿಸಿ ತೋರಿಸತಕ್ಕದ್ದು. |
| 14 | ಪ್ರಸ್ತಾಪಿತ ಜಮೀನನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ BESCOM ನಿರ್ದೇಶನದಂತೆ ಎಲೆಕ್ಟ್ರಿಕ್ ಕೇಬಲ್ ಗಳನ್ನು ಅಳವಡಿಸತಕ್ಕದ್ದು. |
| 15 | ನಾಲಾ ಬಫರ್ ಗಾಗಿ ಕಾಯ್ದಿರಿಸಿರುವ ಪ್ರದೇಶವನ್ನು ಸ್ಥಳೀಯ ಸಂಸ್ಥೆ ಅಥವಾ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಇತರೆ ಸರ್ಕಾರಿ ಅಥವಾ ಸರ್ಕಾರೇತರ ಸಂಸ್ಥೆಗಳಿಂದ Storm Water Drain ಅಥವಾ ಒಳಚರಂಡಿ ವ್ಯವಸ್ಥೆಗಳು ಹಾಗೂ ರಸ್ತೆಯನ್ನು ಅಭಿವೃದ್ಧಿಪಡಿಸುವ ಸಂದರ್ಭದಲ್ಲಿ ಮುಫತ್ತಾಗಿ ಸಾರ್ವಜನಿಕ ಉಪಯೋಗಕ್ಕಾಗಿ ನೊಂದಾಯಿತ ಪರಿತ್ಯಜನಾ ಪತ್ರದ ಮೂಲಕ ಪ್ರಾಧಿಕಾರಕ್ಕೆ ಹಸ್ತಾಂತರಿಸತಕ್ಕದ್ದು. |

| | |
|---|---|
| 16 | ಅಭಿವೃದ್ಧಿ ಯೋಜನೆಯಲ್ಲಿ ಪ್ರಸ್ತಾಪಿಸಿರುವ ಎಲ್ಲಾ ರಸ್ತೆಗಳನ್ನು IRC Specificationಪ್ರಕಾರ ಅಭಿವೃದ್ಧಿ ಪಡಿಸತಕ್ಕದ್ದು ಅದಕ್ಕೂ ಮುಂಚೆ ಅಂದಾಜು ಪಟ್ಟಿಯನ್ನು ಬೆಂಗಳೂರು ಅಭೀವೃದ್ಧಿ ಪ್ರಾಧಿಕಾರದ ಅಭಿಯಂತರ ವಿಭಾಗದಿಂದ ಅನುಮೋದಿಸಿಕೊಳ್ಳತಕ್ಕದ್ದು ರಸ್ತೆ ಅಭಿವೃದ್ಧಿ ಪಡಿಸುವ ಸಮಯದಲ್ಲಿ ಅಭಿಯಂತರ ವಿಭಾಗದಿಂದ ಸ್ಥಳ ಪರಿಶೀಲನೆ ಮತ್ತು ಕಾಮಗಾರಿ ಪರಿಶೀಲನೆ ಅನುವು ಮಾಡಿಕೊಡತಕ್ಕದ್ದು. |
| 17 | ಅಭಿವೃದ್ಧಿ ನಕ್ಷೆಯಲ್ಲಿ Sewage Treatment plant Solid Waste managementಗೆ ಅಗತ್ಯ ಜಾಗಗಳನ್ನು ಗುರುತಿಸಿದ್ದು Dual Piping Systemಅನ್ನು ಅಳವಡಿಸಿ BWSSB ನಿಂದ ನಕ್ಷೆ ಮೇಲೆ ಅಧಿಕೃತ ಸಹಿ ಪಡೆದು ಕಟ್ಟಡ ನಕ್ಷೆ ಅನುಮೋದಿಸುವ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸುವುದು. |
| 18 | BWSSB,BESCOM, KSPCB, ವಾಯುಯಾನ ಪ್ರಾಧಿಕಾರ, ಅಗ್ನಿಶಾಮಕ ಇಲಾಖೆ ಗಳಿಂದ NOC ಪಡೆದು ಕಟ್ಟಡ ನಕ್ಷೆ ಅನುಮೋದಿಸುವ ಸಕ್ಷಮ ಪ್ರಾಧಿಕಾರಕ್ಕೆ ಸಲ್ಲಿಸುವುದು. |
| 19 | ಸದರಿ ವಸತಿ ವಿನ್ಯಾಸದಲ್ಲಿ ಪ್ರಾಧಿಕಾರದ ದಿನಾಂಕ.08/11/2010 ರ ಸುತ್ತೋಲೆಯಂತೆ ಒಟ್ಟು ವಸತಿ ನಿವೇಶನಗಳ ಶೇ.10 ರಷ್ಟು ವಸತಿ ಘಟಕಗಳನ್ನು (EWS) ಆರ್ಥಿಕ ಹಿಂದುಳಿದ ವರ್ಗದವರಿಗಾಗಿ ಮತ್ತು (LIG) ಕಡಿಮೆ ಆದಾಯ ವರ್ಗದವರಿಗಾಗಿ ಕಾಯ್ದಿರಿಸತಕ್ಕದ್ದು, |
| 20 | ಪ್ರಶ್ನಿತ ಪ್ರದೇಶದಲ್ಲಿ ಹಾದು ಹೋಗುವ ಹಳ್ಳ ಕೊಳ್ಳಗಳ ನೀರಿನ ಹರಿವಿಗೆ ಅಡಚಣೆ ಉಂಟು ಮಾಡದೆ ಸರಾಗವಾಗಿ ಹಾದು ಹೋಗುವಂತೆ ಅಭಿವೃದ್ಧಿ ಪಡಿಸುವುದು. |
| 21 | ಸಕ್ಷಮ ಪ್ರಾಧಿಕಾರದ ಅಭಿಯಂತರ ವಿಭಾಗದವರು ಕೆರೆ / ನಾಲಾ Buffer ಗಾಗಿ ಕಾಯ್ದಿರಿಸಿರುವ ಜಾಗಗಳನ್ನು ಯಥಾವತ್ತಾಗಿ ಸ್ಥಳದಲ್ಲಿ ಕಾಯ್ದಿರಿಸಲಾಗಿದೆಯೇ ಎಂಬುದರ ಬಗ್ಗೆ ಪರಿಶೀಲಿಸಿಕೊಂಡು ಬಫರ್ ಜಾಗದಲ್ಲಿ ಯಾವುದೇ ಒತ್ತುವರಿ/ನಿರ್ಮಾಣಗಳು ಬಾರದಂತೆ ಕಟ್ಟುನಿಟ್ಟಿನ ಕ್ರಮ ಜರುಗಿಸತಕ್ಕದ್ದು. |
| 22 | ಪ್ರಾಧಿಕಾರದ ಭೂ ಸ್ವಾಧೀನ ವಿಭಾಗದವರು ದೃಢೀಕರಿಸಿರುವ ಸರ್ವೆ ನಕ್ಷೆಯಲ್ಲಿನ ಖರಾಬು ವಿಸ್ತೀರ್ಣ ಪರಿಚಲನೆಗಳನ್ನು ವಸತಿ ಅಭಿವೃದ್ಧಿ ಯೋಜನಾ ನಕ್ಷೆಯಲ್ಲಿ ಅಳವಡಿಸಿರುವಂತೆ ಸ್ಥಳದಲ್ಲಿ ಕಾಯ್ದಿರಿಸಲು ಬದ್ಧರಿರತಕ್ಕದ್ದು. |
| 23 | ಅಭಿವೃದ್ಧಿ ನಕ್ಷೆಯಲ್ಲಿ ತೋರಿಸಿರುವ ರಸ್ತೆ ವಿಶಾಲತೆ ಪ್ರದೇಶವನ್ನು ಪ್ರಾಧಿಕಾರಕ್ಕೆ ಪುಕ್ಕಟೆಯಾಗಿ ಹಸ್ತಾಂತರಿಸತಕ್ಕದ್ದು. |

| | |
|---|---|
| 24 | ಅಭಿವೃದ್ಧಿ ನಕ್ಷೆಯಂತೆ ಉದ್ಯಾನವನ / ಬಯಲು ಜಾಗಕ್ಕಾಗಿ ಕಾಯ್ದಿರಿಸಿರುವ ಜಾಗಕ್ಕೆ Chain Link Fencing ಮಾಡಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದ ಸ್ವತ್ತು ಎಂದು ನಾಮಫಲಕ ಹಾಕುವುದು. |
| 25 | ಮಾನ್ಯ ಉಚ್ಚ ನ್ಯಾಯಾಲಯದ WP No. 41129 / 2015, ದಿನಾಂಕ 30.09.2015 ರ ಆದೇಶದಂತೆ ಮೆಟ್ರೋಸೆಸ್ ಪಾವತಿಸುವ ಸಂಬಂಧ ಸರ್ಕಾರದ ಅಂತಿಮ ತೀರ್ಮಾನಕ್ಕೆ ಬದ್ಧರಿರತಕ್ಕದ್ದು. |
| 26 | ಪ್ರಾಧಿಕಾರವು ವಿಧಿಸುವ ಇತರೆ ಷರತ್ತುಗಳಿಗೆ ಬದ್ಧರಾಗಿರುವುದು. |

ಆಯುಕ್ತರು,
ಬೆಂಅಪ್ರಾ, ಬೆಂಗಳೂರು.

ಇವರಿಗೆ

ಶ್ರೀ ಬಿ.ಎಂ. ಜಯಶಂಕರ್,
ಮ್ಯಾನೇಜಿಂಗ್ ಪಾರ್ಟನರ್,
ಆದರ್ಶ ಡೆವಲಪರ್ಸ್,
# 10, ವಿಠಲ ಮಲ್ಯ ರಸ್ತೆ,
ಬೆಂಗಳೂರು 560 001.